ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

ಭಾಗ – ೪ಎ Part – IVA	ಬೆಂಗಳೂರು, ಗುರುವಾರ, ೦೮, ಜನವರಿ, ೨೦೨೬(ಪುಷ್ಯ, ೧೮, ಶಕವರ್ಷ, ೧೯೪೭) BENGALURU, THURSDAY, 08, JANUARY, 2026(PUSHYA , 18, SHAKAVARSHA, 1947)	ನಂ. ೨೨ No. 22

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 89 ಶಾಸನ 2025, ಬೆಂಗಳೂರು, ದಿನಾಂಕ: 08.01.2026

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ಅಧಿನಿಯಮ, 2025 ಇದಕ್ಕೆ 2026ರ ಜನವರಿ ತಿಂಗಳ 07ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2026ರ ಕರ್ನಾಟಕ ಅಧಿನಿಯಮ ಸಂಖ್ಯೆ: 08 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

2026 ರ ಕರ್ನಾಟಕ ಅಧಿನಿಯಮ ಸಂಖ್ಯೆ: 08

(2026ರ ಜನವರಿ ತಿಂಗಳ 8ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ಅಧಿನಿಯಮ, 2025

(2026ರ ಜನವರಿ ತಿಂಗಳ 7ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ 38)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. ಪ್ರಕರಣ 3ರ ತಿದ್ದುಪಡಿ.- ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ 38)ರ, 3ನೇ ಪ್ರಕರಣದ, (3)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಎ-ಎ) ಬಯಲುಸೀಮೆ ಪ್ರದೇಶದ ಅಧಿಕಾರವ್ಯಾಪ್ತಿಯೊಳಗಿನ ಜಿಲ್ಲೆ ಅಥವಾ ತಾಲ್ಲೂಕನ್ನು ನೋಡಲ್ ಜಿಲ್ಲೆ ಅಥವಾ ತಾಲ್ಲೂಕನ್ನಾಗಿ ಆಯ್ಕೆ ಮಾಡಿದ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರು"

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಜಿ. ಶ್ರೀಧರ್
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

DEPARTMENT OF PARLIAMENTARY AFFAIRS AND LEGISLATION SECRETARIAT

NOTIFICATION

NO: DPAL 89 SHASANA 2025, BENGALURU, DATED:08.01.2026

ಭಾರತ ಸಂವಿಧಾನದ ಅನುಚ್ಛೇದ 348ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ಅಧಿನಿಯಮ, 2025 (2026ರ ಕರ್ನಾಟಕ ಅಧಿನಿಯಮ ಸಂಖ್ಯೆ: 08)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

KARNATAKA ACT NO. 08 OF 2026

(First published in the Karnataka Gazette Extra-ordinary on the 8th day of January, 2026)

BAYALUSEEME DEVELOPMENT BOARD (AMENDMENT) ACT, 2025

(Received the assent of the Governor on the 7th day of January, 2026)

An Act further to amend the Bayaluseeme Development Board Act, 1994.

Whereas it is expedient further to amend the Bayaluseeme Development Board Act, 1994 (Karnataka Act 38 of 1994), for the purposes hereinafter appearing;

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

Be it enacted by the Karnataka State Legislature in the seventy sixth year of the Republic of India, as follows:-

1. Short title and commencement.- (1) This Act may be called the Bayaluseeme Development Board (Amendment) Act, 2025.

(2) It shall come into force at once.

2. Amendment of section 3.- In the Bayaluseeme Development Board Act, 1994 (Karnataka Act 38 of 1994), in section 3, in sub-section (3), after clause (a), the following shall be inserted, namely:-

"(a-a) Members of the Karnataka Legislative Council who have selected District or Taluk as Nodal District or Taluk within the jurisdiction of the area of Bayaluseeme;"

The above translation of ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಲಿ (ತಿದ್ದುಪಡಿ) ಅಧಿನಿಯಮ, 2025 (2026ರ ಕರ್ನಾಟಕ ಅಧಿನಿಯಮ ಸಂಖ್ಯೆ: 08) be published in the official Gazette under Article 348 of the Constitution of India.

THAAWARCHAND GEHLOT
GOVERNOR OF KARNATAKA

By Order and in the name of
the Governor of Karnataka,

G. Sridhar
Secretary to Government
Department of Parliamentary Affairs
and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH